24	367	ಬಾನಾಪುರ–ಗದ್ದನಕೇರಿ ರಸ್ತೆ	156.62	28.05.2014
		ಒಟ್ಟು	**6326.15**	

ಪಟ್ಟಣ ಪಂಚಾಯಿತಿಗಳನ್ನಾಗಿ ಮೇಲ್ದರ್ಜೆಗೇರಿಸುವುದು:

883 (918);ಶ್ರೀ ಭೀಮಾ ನಾಯ್ಕ ಎಸ್. (ಹಗರಿಬೊಮ್ಮನಹಳ್ಳಿ)

(ಅ) ಹಗರಿಬೊಮ್ಮನಹಳ್ಳಿ ತಾಲ್ಲೂಕು ಕೇಂದ್ರವಾಗಿದ್ದು, ಹಾಲಿ ಇರುವ ಗ್ರಾಮ ಪಂಚಾಯಿತಿಯನ್ನು 2011ರ ಜನಗಣತಿಯ ಪ್ರಕಾರ ಪಟ್ಟಣ ಪಂಚಾಯಿತಿ/ಪುರಸಭೆಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಆ) ಹೊಸಪೇಟೆ ತಾಲ್ಲೂಕು ಹಗರಿಬೊಮ್ಮನಹಳ್ಳಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಬರುವ ಮರಿಯಮ್ಮನಹಳ್ಳಿ ಗ್ರಾಮ ಪಂಚಾಯಿತಿಯನ್ನು 2011ರ ಜನಗಣತಿಯ ಪ್ರಕಾರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

(ಇ) ಹಾಗಿದ್ದಲ್ಲಿ, ಯಾವಾಗ ಈ ಮೇಲಿನ ಎರಡು ಗ್ರಾಮ ಪಂಚಾಯಿತಿಗಳನ್ನು ಮೇಲ್ದರ್ಜೆಗೇರಿಸಲಾಗುವುದು; ವಿವರಗಳನ್ನು ನೀಡುವುದು?

ಡಾ: ಖಮರುಲ್ ಇಸ್ಲಾಂ (ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು, ಸಾರ್ವಜನಿಕ ಉದ್ದಿಮೆಗಳ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಮತ್ತು ವಕ್ಫ್ ಸಚಿವರು)

(ಅ) 2011ರ ಜನಗಣತಿಯನ್ವಯ ಬಳ್ಳಾರಿ ಜಿಲ್ಲೆಯ ಹಗರಿಬೊಮ್ಮನಹಳ್ಳಿ ಗ್ರಾಮದ ಜನಸಂಖ್ಯೆಯ 8998 ಇರುತ್ತದೆ . . . . . 10000ಕ್ಕಿಂತ . . . . . ಕಡಿಮೆ ಜನಸಂಖ್ಯೆಯನ್ನು ಹೊಂದಿರುವುದರಿಂದ ಮೇಲ್ದರ್ಜೆಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದೆ ಇರುವುದಿಲ್ಲ.

(ಆ) 2011ರ ಜನಗಣತಿಯನ್ವಯ ಮರಿಯಮ್ಮನಹಳ್ಳಿ ಗ್ರಾಮಕ್ಕೆ ಪಟ್ಟಣ ಪಂಚಾಯಿತಿಯನ್ನು ಸ್ಥಾಪಿಸುವ ಬಗ್ಗೆ ಕರ್ನಾಟಕ ಪೌರಸಭೆಗಳ ಕಾಯ್ದೆ

1964ರನ್ವಯ ಪರಿಶೀಲಿಸಿ ಪ್ರಸ್ತಾವನೆ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳಿಗೆ ತಿಳಿಸಲಾಗಿದೆ.

(ಇ) ಮರಿಯಪ್ಪನಹಳ್ಳಿ ಗ್ರಾಮವನ್ನು ಮಾತ್ರ ಪಟ್ಟಣ ಪಂಚಾಯಿತಿಯನ್ನಾಗಿ ಮೇಲ್ದರ್ಜೆಗೇರಿಸುವ ಪ್ರಸ್ತಾವನೆಯನ್ನು ಜಿಲ್ಲಾಧಿಕಾರಿಗಳಿಂದ ಪಡೆದು ಕರ್ನಾಟಕ ಪೌರಸಭೆಗಳ ಅಧಿನಿಯಮ 1964 ಕಲಂ 349, 350, 353, 355, 355–ಎ ಅನ್ವಯ ಪರಿಶೀಲಿಸಿ, ಕ್ರಮ ಕೈಗೊಳ್ಳಾಗುವುದು.

ನಿರಂತರ ಜ್ಯೋತಿ ಕಾಮಗಾರಿ ವಿಳಂಬ

884 (1331); ಶ್ರೀ ಭೂಸನೂರ ರಮೇಶ್ ಬಾಳಪ್ಪ (ಸಿಂಧಗಿ)

(ಅ) ಸಿಂದಗಿ ಕ್ಷೇತ್ರದ ವ್ಯಾಪ್ತಿಯಲ್ಲಿ ನಿರಂತರ ಜ್ಯೋತಿ ಯೋಜನೆಯ ಕಾಮಗಾರಿಯು ಮಂಜೂರಾಗಿದ್ದು, ಕಾಮಗಾರಿಯು ಪೂರ್ಣಗೊಳಿಸಲು ವಿಳಂಬವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಾಮಗಾರಿಯ ವಿಳಂಬಕ್ಕೆ ಕಾರಣಗಳೇನು, ಕಾಮಗಾರಿ ವಿಳಂಬಕ್ಕೆ ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗಿದೆ; ಈ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು? (ಸಂಪೂರ್ಣ ವಿವರ ನೀಡುವುದು)

ಶ್ರೀ ಡಿ. ಕೆ. ಶಿವಕುಮಾರ್ (ಇಂಧನ ಸಚಿವರು)

(ಅ) ಬಂದಿದೆ.

(ಆ) ಸಿಂಧಗಿ ಕ್ಷೇತ್ರದ ವ್ಯಾಪ್ತಿಯಲ್ಲಿ ನಿರಂತರ ಜ್ಯೋತಿ ಯೋಜನೆಯು ಮೇ–2012ರೊಳಗೆ ಪೂರ್ಣಗೊಳಿಸಬೇಕಿತ್ತು. ಕಾಮಗಾರಿಯ ವಿಳಂಬಕ್ಕೆ ಕಾರಣಗಳು ಈ ಕೆಳಕಂಡಂತಿವೆ:–

1) ಸಿಂಧಗಿ ತಾಲ್ಲೂಕಿನ ಕೆಲವು ಪ್ರದೇಶಗಳಲ್ಲಿ ಕಠಿಣ ಕಲ್ಲು ಬಂಡೆ ಗಳಲ್ಲಿ ಗುಂಡಿ ತೋಡಿ ಕಂಬ ಅಳವಡಿಸುವುದು ಕಷ್ಟಕರ